157 ಪ್ರ
ನಿ-330
6
93
16/12/25

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ. ಮತ್ತು ಇತರರು ನಿಯಮ 330 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.**

**ವಿಷಯ:-**

ರಾಜ್ಯದ ರಬ್ಬರ್ ಬೆಳೆಗಾರರ ಹಲವಾರು ಬೇಡಿಕೆಗಳು ದೀರ್ಘಕಾಲದಿಂದ ಈಡೇರದಿರುವುದರಿಂದ ಪ್ರಸ್ತುತ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದಾರೆ. ರಬ್ಬರು ಕೃಷಿಯನ್ನು ತೋಟಗಾರಿಕಾ ಬೆಳೆಯೆಂದು ಪರಿಗಣಿಸಿ ಅದನ್ನು ತೋಟಗಾರಿಕಾ ಇಲಾಖೆಯ ಸುಪರ್ದಿಗೆ ಸೇರಿಸುವುದು, ರಬ್ಬರಿಗೆ ಕಿಲೋ ಒಂದಕ್ಕೆ ಕನಿಷ್ಟ 258 ರೂಪಾಯಿಗಳ ಬೆಂಬಲ ಬೆಲೆ ನಿಗಧಿ ಮಾಡಿ ಬೆಳೆಗಾರರಿಗೆ ದೊರಕುವಂತೆ ಕ್ರಮ ಕೈಗೊಳ್ಳುವುದು, ರಬ್ಬರು ಕೃಷಿಗೂ ಹವಾಮಾನ ಆಧಾರಿತ ವಿಮೆ ಸೌಲಭ್ಯ ಒದಗಿಸಿಕೊಡುವುದು ಹಾಗೂ ರಾಜ್ಯದಲ್ಲಿ ರಬ್ಬರು ಬೆಳೆ ಸ್ಥಿರೀಕರಣ ನಿಧಿ ಸ್ಥಾಪನೆ ಮಾಡಬೇಕೆಂಬ ಒತ್ತಾಯ ಸತತವಾಗಿ ಕೇಳಿ ಬರುತ್ತಿವೆ.

ಇದಿಷ್ಟೇ ಅಲ್ಲದೇ ಪ್ರಸ್ತುತ ರಬ್ಬರು ಬೆಳೆ ವಾಣಿಜ್ಯ ಇಲಾಖೆಯ ವ್ಯಾಪ್ತಿಯಲ್ಲಿದ್ದು, ಅದನ್ನು ಕೃಷಿ ಮತ್ತು ತೋಟಗಾರಿಕಾ ಇಲಾಖೆಯ ಸುಪರ್ದಿಗೆ ತರುವಂತೆ ಮತ್ತು ಕಾಂಪೌಂಡೆಡ್ ಅಥವಾ ಸಂಯುಕ್ತ ರಬ್ಬರಿನ ಆಮದಿನ ಸುಂಕವನ್ನು ಪ್ರಸ್ತುತ 0 ರಿಂದ ಶೇಕಡಾ 5 ಇರುವುದನ್ನು ಗರಿಷ್ಟ ಪ್ರಮಾಣಕ್ಕೆ ಏರಿಸಿ ಆಮದು ಬೆಲೆ ನಿರ್ಧರಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕೆಂಬ ಬೇಡಿಕೆಗಳು ನಿರಂತರವಾಗಿ ರಬ್ಬರ್ ಬೆಳೆಗಾರರಿಂದ ಕೇಳಿ ಬರುತ್ತಿವೆ ಸದರಿ ಎಲ್ಲಾ ಬೇಡಿಕೆಗಳ ಕುರಿತು ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

****

**ಉತ್ತರ :-**

ರಾಜ್ಯದಲ್ಲಿ ರಬ್ಬರ್ ಬೆಳೆಯನ್ನು ಅಂದಾಜು 50,800 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು ಉತ್ಪಾದನೆಯು 5.27 ಲಕ್ಷ ಮೆಟ್ರಿಕ್ ಟನ್ ಗಳಾಗಿರುತ್ತದೆ. ರಬ್ಬರ್ ಬೆಳೆಯನ್ನು ಪ್ರಮುಖವಾಗಿ ದಕ್ಷಿಣ ಕನ್ನಡ, ಕೊಡಗು, ಉಡುಪಿ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ.

ಸದರಿ ಬೆಳೆಗೆ ಸಂಬಂಧಿಸಿದ ಯೋಜನೆಗಳನ್ನು ಪ್ರತ್ಯೇಕವಾಗಿ ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಮಂತ್ರಾಲಯದ ಅಧೀನದಲ್ಲಿ ಬರುವ ರಬ್ಬರ್ .ಮಂಡಳಿವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಮಂಡಳಿಯನ್ನು 1947 ರಲ್ಲಿ ಸ್ಥಾಪಿಸಲಾಗಿದ್ದು, ಪ್ರಧಾನ ಕಛೇರಿಯು ಕೇರಳದ ಕೊಟ್ಟಾಯಮ್ ಜಿಲ್ಲೆಯಲ್ಲಿರುತ್ತದೆ. ರಾಜ್ಯದಲ್ಲಿ ಪ್ರಮುಖವಾಗಿ ರಬ್ಬರ್ ಬೆಳೆಯನ್ನು ಬೆಳೆಯುವ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಶಿವಮೊಗ್ಗ ಜಿಲ್ಲೆಯಲ್ಲಿ ಸದರಿ ಮಂಡಳಿಯ ಪ್ರಾದೇಶಿಕ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ.

**ರಬ್ಬರ್ ಮಂಡಳಿಯ ಉದ್ದೇಶಗಳು:**

1. ರಬ್ಬರ್ ಮಂಡಳಿಯು ರಬ್ಬರ್ ಬೆಳೆಗಾರರಿಗೆ ಫಲಾನುಭವಿ ಆಧಾರಿತ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.
2. ರಫ್ತು ಉತ್ತೇಜನ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸುವುದು.
3. ರಬ್ಬರ್ ಬೆಳೆಗಾರರಿಗೆ ಮಾರುಕಟ್ಟೆ ಕುರಿತು ಮಾಹಿತಿ ಒದಗಿಸುವುದು.
4. ಗುಣಮಟ್ಟ ಪರಿಶೀಲನೆ ಹಾಗೂ ಗ್ರೇಡಿಂಗ್ ಸಂಬಂಧಿತ ಕಾರ್ಯಗಳನ್ನು ನಿರ್ವಹಿಸುವುದು.
5. ರಬ್ಬರ್ ತರಬೇತಿ ಕೇಂದ್ರದ ಮುಖಾಂತರ ಬೆಳೆಗಾರರಿಗೆ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

ರಬ್ಬರ್ ಬೆಳೆಯ ಸಮಗ್ರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಂಡಳಿವತಿಯಿಂದ ಅನುಷ್ಠಾನಗೊಳಿಸಲಾಗತ್ತಿದೆ. ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಅಧೀನದ ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗವು ಪ್ರತಿ ವರ್ಷ ಪ್ರಮುಖವಾದ 22 ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳಿಗೆ ಕನಿಷ್ಟ ಬೆಂಬಲ ಬೆಲೆಯನ್ನು ನಿಗಧಿಪಡಿಸುತ್ತದೆ. ಸದರಿ ಉತ್ಪನ್ನಗಳ ಪಟ್ಟಿಯಲ್ಲಿ ರಬ್ಬರ್ ಬೆಳೆಯು ಸೇರ್ಪಡೆಗೊಂಡಿರುವುದಿಲ್ಲ.

- ಹವಾಮಾನ ಆಧಾರಿತ ವಿಮೆ ಸೌಲಭ್ಯ ಯೋಜನೆಯಡಿ ರಬ್ಬರ್ ಬೆಳೆಯನ್ನು ಸೇರ್ಪಡೆಗೊಂಡಿರುವುದಿಲ್ಲ.
- ರಬ್ಬರ್ ಬೆಳೆಯ ಆಮದು ಸುಂಕ ಹೆಚ್ಚಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಮೂಲಕ ಸಲ್ಲಿಸಬೇಕಾಗಿದ್ದು, ಪರಿಶೀಲಿಸಿ ಕ್ರಮವಹಿಸಲಾಗುವುದು.

**ರಬ್ಬರ್ ಮಂಡಳಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:**

1. ಸಾಂಪ್ರದಾಯಿಕ ಪ್ರದೇಶಗಳಲ್ಲಿ ತೋಟಗಳ ಅಭಿವೃದ್ಧಿ : ಸದರಿ ಯೋಜನೆಯಡಿ ಸಾಂಪ್ರದಾಯಿಕ ಪ್ರದೇಶಗಳಲ್ಲಿ ರಬ್ಬರ್ ಬೆಳೆಯ ಪ್ರದೇಶ ವಿಸ್ತರಣೆ ಕೈಗೊಳ್ಳಲು ಪ್ರತಿ ಹೆಕ್ಟೇರ್ ಗೆ ರೂ.30,000/- ಗಳ ಸಹಾಯಧನವನ್ನು ಮೊದಲನೇ ವರ್ಷದಲ್ಲಿ ಹಾಗೂ ಮೂರನೇ ವರ್ಷದಲ್ಲಿ ನಿರ್ವಹಣೆಗಾಗಿ ಪ್ರತಿ ಹೆಕ್ಟೇರ್ ಗೆ ರೂ.10,000/- ಗಳ ಸಹಾಯಧನವನ್ನು ನೀಡಲಾಗುವುದು.
2. ಸಾಂಪ್ರದಾಯಕವಲ್ಲದ ಪ್ರದೇಶಗಳಲ್ಲಿ ತೋಟಗಳ ಅಭಿವೃದ್ಧಿ : ಸದರಿ ಯೋಜನೆಯಡಿ ಸಾಂಪ್ರದಾಯಕವಲ್ಲದ ಪ್ರದೇಶಗಳಲ್ಲಿ ರಬ್ಬರ್ ಬೆಳೆಯ ಪ್ರದೇಶ ವಿಸ್ತರಣೆ ಕೈಗೊಳ್ಳಲು ಪ್ರತಿ ಹೆಕ್ಟೇರ್ ಗೆ ರೂ.50,000/- ಗಳ ಸಹಾಯಧನವನ್ನು ಮೊದಲನೇ ವರ್ಷದಲ್ಲಿ ಸೆಪ್ಟೆಂಬರ್ ಮಾಹೆಯಲ್ಲಿ ರೂ.40,000/- ಗಳನ್ನು ಹಾಗೂ ಫೆಬ್ರುವರಿ – ಮಾರ್ಚ್ ಮಾಹೆಗಳಲ್ಲಿ ರೂ.10,000/- ಗಳ ಸಹಾಯಧನವನ್ನು ಎರಡು ಕಂತುಗಳಲ್ಲಿ ನೀಡಲಾಗುವುದು.
3. ಯಂತ್ರೋಪಕರಣಗಳ ಖರೀದಿಗೆ ಸಹಾಯಧನ :
   a) ಸ್ಪ್ರೇಯಿಂಗ್ ಯಂತ್ರಗಳ ಖರೀದಿಗೆ ರೂ.30,000/- ದಂತೆ ಸಹಾಯಧನವನ್ನು ನೀಡಲಾಗುವುದು.
   b) ಲೇಟೆಕ್ಸ್ ಸಂಗ್ರಹಣಾ ಯಂತ್ರಗಳ ಖರೀದಿಗೆ ಗರಿಷ್ಟ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.
   c) ಪರಿಶಿಷ್ಟ ಜಾತಿಯ ರೈತರಿಗೆ ರಬ್ಬರ್ ಶೀಟಿಂಗ್ ರೋಲರ್ ಗಳ ಖರೀದಿಗೆ ಗರಿಷ್ಟ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.
4. ಪರಿಶಿಷ್ಟ ಜಾತಿಯ ರೈತರಿಗೆ ಸಾಂಪ್ರದಾಯಿಕ ಶೈಲಿಯ ಹೊಗೆ ಮನೆ ನಿರ್ಮಾಣ : ಸಾಂಪ್ರದಾಯಿಕ ಶೈಲಿಯ ಹೊಗೆ ಮನೆ ನಿರ್ಮಾಣಕ್ಕೆ ರೂ.40,000/- ದಂತೆ ಸಹಾಯಧನವನ್ನು ನೀಡಲಾಗುವುದು.
5. ರಫ್ತು ಮಾರುಕಟ್ಟೆಗೆ ಪೂರಕವಾದ ನೈಸರ್ಗಿಕ ರಬ್ಬರ್ ಬ್ರಾಂಡಿಂಗ್ ಗೆ ಪ್ರೋತ್ಸಾಹ ಯೋಜನೆಯಡಿ ರೂ.2/- ರಂತೆ ಪ್ರತಿ ಕೆ.ಜಿ. ರಬ್ಬರ್ ಗೆ ಸಹಾಯಧನವನ್ನು ನೀಡಲಾಗುವುದು.

ಮಂಡಳಿಯ ವತಿಯಿಂದ ರಬ್ಬರ್ ಬೆಳೆಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಮಂಡಳಿಯು ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖಾ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ರಬ್ಬರ್ ತೋಟಗಾರಿಕೆ ಬೆಳೆಯಾಗಿರುತ್ತದೆ, ಆದರೆ ತೋಟಗಾರಿಕೆ ಇಲಾಖೆಯ ವತಿಯಿಂದ ರಬ್ಬರ್ ಬೆಳೆಗೆ ಸಂಬಂಧಿಸಿದಂತೆ ಯಾವುದೇ ಪ್ರತ್ಯೇಕ ಕಾರ್ಯಕ್ರಮ ಇರುವುದಿಲ್ಲ. ಈ ಬೆಳೆಯನ್ನು ತೋಟಗಾರಿಕೆ ಇಲಾಖೆಗೆ ಒಳಪಡಿಸುವ ಪ್ರಸ್ತಾವನೆ ಇರುವುದಿಲ್ಲ.

**ಸಂಖ್ಯೆ: HORTI 625 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**